ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1592
ಸದಸ್ಯರ ಹೆಸರು : ಶ್ರೀ ಶಶೀಲ್ ನಮೋಶಿ
ಉತ್ತರಿಸುವ ದಿನಾಂಕ : 11-03-2022
ಉತ್ತರಿಸುವ ಸಚಿವರು : ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

ಕ್ರ.ಸಂ.	ಪ್ರಶ್ನೆ	ಉತ್ತರ
ಅ)	ಕೆ.ಆರ್.ಇ.ಐ.ಎಸ್ ನೌಕರರಿಗೆ ಕಳೆದ 10 ವರ್ಷಗಳಿಂದ ಪಾರದರ್ಶಕ ಕೌನ್ಸಿಲಿಂಗ್ ಮೂಲಕ ವರ್ಗಾವಣೆ ಮಾಡದಿರುವುದು ಸರ್ಕಾರ ಗಮನಕ್ಕೆ ಬಂದಿದೆಯೇ;	ಸಂಘದ ವಸತಿ ಶಾಲೆಗಳಿಗೆ 2011 ಹಾಗೂ ತದನಂತರ ಹಂತ ಹಂತವಾಗಿ ಖಾಯಂ ಸಿಬ್ಬಂದಿಗಳ ನೇಮಕಾತಿ ಮಾಡಿದ್ದು, ವರ್ಗಾವಣೆ ಪ್ರಕ್ರಿಯೆಯನ್ನು 2018-19 ನೇ ಸಾಲಿನ ವರೆಗೆ ಕೌನ್ಸಿಲಿಂಗ್ ಮುಖಾಂತರ ವರ್ಗಾವಣೆ ಮಾಡಿರುವುದಿಲ್ಲ. 2019-20ನೇ ಸಾಲಿನಲ್ಲಿ ಸರ್ಕಾರದ ಆದೇಶ ಸಂಖ್ಯೆ ಸಕಇ 19 ಮೊದೇಶಾ 2019, ದಿನಾಂಕ: 06.07.2019 ರ ವರ್ಗಾವಣೆ ಮಾರ್ಗಸೂಚಿಯನ್ವಯ ಸಂಘದ ವಸತಿ ಶಾಲೆಗಳ ಸಿಬ್ಬಂದಿಗಳಿಗೆ ಕೌನ್ಸಿಲಿಂಗ್ ಮುಖಾಂತರ ವರ್ಗಾವಣೆ ಪ್ರಕ್ರಿಯೆಯನ್ನು ಕೈಗೊಳ್ಳಲಾಗಿರುತ್ತದೆ. 2020-21 ಹಾಗೂ 2021-22ನೇ ಸಾಲುಗಳಲ್ಲಿ ಕೋವಿಡ್-19 ಸಾಂಕ್ರಾಮಿಕ ರೋಗ ಹರಡುವಿಕೆ ಹಿನ್ನೆಲೆಯಲ್ಲಿ ಸಂಘದ ವತಿಯಿಂದ ಕೌನ್ಸಿಲಿಂಗ್ ಮುಖಾಂತರ ವರ್ಗಾವಣೆ ಪ್ರಕ್ರಿಯೆಯನ್ನು ಕೈಗೊಳ್ಳಲು ಸಾಧ್ಯವಾಗಿರುವುದಿಲ್ಲ. ಪ್ರಸಕ್ತ ಸಾಲಿನಲ್ಲಿ ವರ್ಗಾವಣೆ ಮಾರ್ಗಸೂಚಿಯನ್ನು ಸಿದ್ಧಪಡಿಸಲು ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗಿರುತ್ತದೆ. ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವತಿಯಿಂದ ಕರಡು ವರ್ಗಾವಣೆ ಮಾರ್ಗಸೂಚಿಯನ್ನು ಸಿದ್ಧಪಡಿಸಲಾಗಿದ್ದು, ಸಂಬಂಧಿಸಿದಂತೆ ಸಂಘದ ಖಾಯಂ ಬೋಧಕ/ ಬೋಧಕೇತರ ಸಿಬ್ಬಂದಿ ಪ್ರತಿನಿಧಿಗಳ ಸಭೆಯನ್ನು ಕರೆದು ಚರ್ಚಿಸಿ, ಅಂತಿಮಗೊಳಿಸಿ, ಮಾದರಿ ವರ್ಗಾವಣೆ ಮಾರ್ಗಸೂಚಿಯನ್ನು ಸಮಿತಿಯ ಮುಂದೆ ಮಂಡಿಸಿ, ಸಮಿತಿಯ ನಿರ್ಣಯದಂತೆ ಕ್ರಮವಹಿಸಲಾಗುವುದು.
ಆ)	ಬಂದಿದ್ದಲ್ಲಿ, ಕಾರಣಗಳೇನು; ಪ್ರಸ್ತುತ ವರ್ಷವಾದರೂ ಕೌನ್ಸಿಲಿಂಗ್ ಮೂಲಕ ವರ್ಗಾವಣೆ ಮಾಡಲಾಗುವುದೆಯೇ;	
ಇ)	ನಿರ್ದಿಷ್ಟ ಕಾಲಮಿತಿಯಲ್ಲಿ ಕೌನ್ಸಿಲಿಂಗ್ ಮೂಲಕ ವರ್ಗಾವಣೆ ಮಾಡಲಾಗುವುದೇ; (ವಿವರವಾದ ಮಾಹಿತಿ ನೀಡುವುದು)	

ಸಕಇ 151 ಮೊದೇಶಾ 2022

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು